# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1488 |
| ಸದಸ್ಯರ ಹೆಸರು | : | ಶ್ರೀ ಪಿ.ಹೆಚ್.ಪೂಜಾರ್ |
| ಉತ್ತರಿಸುವ ದಿನಾಂಕ | : | 17/03/2026 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳನ್ನು ಜನಸಂಖ್ಯೆಗೆ ಅನುಗುಣವಾಗಿ ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸಲ್ಪಟ್ಟ ಬಾಗಲಕೋಟೆ ಜಿಲ್ಲೆಯ ಶಿರೂರು ಮತ್ತು ಲೋಕಾಪುರ ಅದರಂತೆ ವಿಜಯಪುರ ಜಿಲ್ಲೆಯಲ್ಲಿ ಬಬಲೇಶ್ವರ ಮತ್ತು ತಿಕೋಟ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳೆಂದು ಪರಿಗಣಿಸಿ ಘೋಷಣೆ ಮಾಡಿದ್ದು, ಕಳೆದ 4 ವರ್ಷಗಳಿಂದ ನೂತನವಾಗಿ ಪಟ್ಟಣ ಪಂಚಾಯಿತಿಗಳೆಂದು ಪರಿಗಣಿಸಿ ಘೋಷಣೆ ಮಾಡಿರುವ ಸಂಸ್ಥೆಗಳಿಗೆ ಚುನಾವಣೆ ನಡೆಸದೇ ಇರುವ ಕಾರಣಕ್ಕೆ ಅಭಿವೃದ್ಧಿ ಚಟುವಟಿಕೆಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಾಗಲಕೋಟೆ ಜಿಲ್ಲೆಯ ಶಿರೂರು ಹಾಗೂ ಲೋಕಾಪುರ ಪಟ್ಟಣ ಪಂಚಾಯತಿಗಳಿಗೆ ವಾರ್ಡ್‌ವಾರು ಮೀಸಲಾತಿ ನಿಗಧಿಪಡಿಸುವ ಸಂಬಂಧ ಸರ್ಕಾರದಿಂದ ಅಧಿಸೂಚನೆ ಹೊರಡಿಸಿ, ಆಕ್ಷೇಪಣೆಯನ್ನು ಆಹ್ವಾನಿಸಲಾಗಿರುತ್ತದೆ. ಅದರಂತೆ ಸದರಿ ಅಧಿಸೂಚನೆಗಳಿಗೆ ಜಿಲ್ಲಾಧಿಕಾರಿ, ಬಾಗಲಕೋಟೆ ಜಿಲ್ಲೆ ರವರಿಂದ ಸ್ವೀಕೃತವಾಗಿರುವ ಆಕ್ಷೇಪಣೆಗಳನ್ನು ಪರಿಶೀಲಿಸಿ ಶಿರೂರು ಹಾಗೂ ಲೋಕಾಪುರ ಪಟ್ಟಣ ಪಂಚಾಯತಿಗಳಿಗೆ ವಾರ್ಡ್‌ವಾರು ಮೀಸಲಾತಿ ನಿಗಧಿಪಡಿಸುವ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.<br><br>ವಿಜಯಪುರ ಜಿಲ್ಲೆ, ಬಬಲೇಶ್ವರ ಹಾಗೂ ತಿಕೋಟ ಪಟ್ಟಣ ಪಂಚಾಯತಿಗಳ ವಾರ್ಡ್ ವಿಂಗಡಣೆ ಅಂತಿಮ ಅಧಿಸೂಚನೆಯನ್ನು ಉಪವಿಭಾಗಾಧಿಕಾರಿಗಳು, ವಿಜಯಪುರ ಜಿಲ್ಲೆ ರವರು ದಿನಾಂಕ: 31.12.2025ರಂದು ಹೊರಡಿಸಿರುತ್ತಾರೆ. ವಾರ್ಡ್‌ವಾರು ಮೀಸಲಾತಿ ನಿಗಧಿ ಸಂಬಂಧ ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ರವರು ಪೌರಾಡಳಿತ ನಿರ್ದೇಶನಾಲಯಕ್ಕೆ ಸಲ್ಲಿಸಿರುವ ಪ್ರಸ್ತಾವನೆಯು ದಿನಾಂಕ:10.03.2026ರಂದು ಸರ್ಕಾರದಲ್ಲಿ ಸ್ವೀಕೃತವಾಗಿರುತ್ತದೆ. ಅದರಂತೆ, ಸದರಿ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡುವಾರು ಮೀಸಲಾತಿ ನಿಗಧಿಪಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಆ) | ಬಂದಿದ್ದಲ್ಲಿ, ಈ ಸಂಸ್ಥೆಗಳಿಗೆ ಚುನಾವಣೆ ನಡೆಸಲು ಯಾವ ಕ್ರಮ ಕೈಗೊಳ್ಳಲಾಗುವುದು? | ನೂತನ ಪಟ್ಟಣ ಪಂಚಾಯಿತಿಗಳಿಗೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964 ಕಲಂ-42ರ ಉಪಕಲಂ-5ರ ರೀತ್ಯಾ ಸುಗಮ ಆಡಳಿತ ನಡೆಸುವ ದೃಷ್ಟಿಯಿಂದ ಸರ್ಕಾರದಿಂದ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿರುತ್ತದೆ. ಆಡಳಿತಾಧಿಕಾರಿಗಳು ಆಯಾ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗದಂತೆ ಕ್ರಮವಹಿಸುತ್ತಿರುತ್ತಾರೆ. ಈ ರೀತಿಯಾಗಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಅಭಿವೃದ್ಧಿ ಕುಂಠಿತಗೊಂಡಿರುವುದಿಲ್ಲ. ನಗರ ಸ್ಥಳೀಯ ಸಂಸ್ಥೆಗಳಲ್ಲಿನ ವಾರ್ಡುವಾರು ಮೀಸಲಾತಿ ಪ್ರಕ್ರಿಯೆ ಪೂರ್ತಿಗೊಂಡ ನಂತರ ಚುನಾವಣೆ ನಡೆಸಲು ಕ್ರಮವಹಿಸಬೇಕಿರುತ್ತದೆ. |

**ಸಂಖ್ಯೆ:** ನಅಇ 14 ಎಲ್‌ಸಿಕ್ಯೂ 2026

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು